**Akashvani : Bangalore**
**National Bulletin In Kannada**
**03.04.2024 / 7.35 am**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**<><*<><>*><>**

**ಮುಖ್ಯಾಂಶಗಳು**

- **ಮೊದಲ ಹಂತದ ಸಾರ್ವತ್ರಿಕ ಚುನಾವಣೆ: ಬಿಜೆಪಿ, ಕಾಂಗ್ರೆಸ್ ಸೇರಿ ವಿವಿಧ ಪಕ್ಷಗಳ ನಾಯಕರಿಂದ ಬಿರುಸುಗೊಂಡ ಪ್ರಚಾರ**
- **ವಿಕಸಿತ ಭಾರತ ಕಾರ್ಯಸೂಚಿಗಳನ್ನು ಜನರಿಗೆ ತಲುಪಿಸುವಂತೆ ಸಚಿವ ಅಮಿತ್ ಶಾ ಕರೆ**
- **ಲೋಕಸಭಾ ಚುನಾವಣೆ: ಕಾಂಗ್ರೆಸ್‌ನಿಂದ ೧೭ ಅಭ್ಯರ್ಥಿಗಳ ಮತ್ತೊಂದು ಪಟ್ಟಿ ಬಿಡುಗಡೆ**
- **ಉತ್ತರದ ಗಡಿಗಳಲ್ಲಿ ಪ್ರಸ್ತುತ ಪರಿಸ್ಥಿತಿ ಎದುರಿಸಲು ಅಗತ್ಯ ಕ್ರಮ - ರಾಜನಾಥ್ ಸಿಂಗ್**
- **ಐಪಿಎಲ್ ಕ್ರಿಕೆಟ್ : ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಲಖನೌ ಸೂಪರ್ ಜಯಂಟ್ಸ್ ಗೆ ೨೮ ರನ್ ಗೆಲುವು**

**<><*<><>*><>**

ಲೋಕ ಸಭಾ ಚುನಾವಣೆಯ ಮೊದಲ ಹಂತಕ್ಕಾಗಿ ಮತದಾನದ ದಿನಾಂಕ ಸಮೀಪಿಸುತ್ತಿರುವಂತೆಯೇ ಪ್ರಚಾರ ದಿನದಿಂದ ದಿನಕ್ಕೆ ವೇಗ ಪಡೆದುಕೊಳ್ಳುತ್ತಿದೆ. ಈ ಹಂತದಲ್ಲಿ ಚುನಾವಣೆ ನಡೆಯಲಿರುವ ರಾಜ್ಯಗಳಲ್ಲಿ ಪ್ರಮುಖ ಪಕ್ಷಗಳ ರಾಜಕೀಯ ನಾಯಕರು ಪ್ರಚಾರ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಕೊಳ್ಳುತ್ತಿದ್ದಾರೆ. ಭಾರತೀಯ ಜನತಾ ಪಕ್ಷ ಸಮರೋಪಾದಿಯಲ್ಲಿ ಪ್ರಚಾರ ಕೈಗೊಂಡಿದೆ. ಪ್ರಧಾನಮಂತ್ರಿ ಹಾಗೂ ಹಿರಿಯ ಬಿಜೆಪಿ ಮುಖಂಡ ನರೇಂದ್ರ ಮೋದಿಯವರು ನಿನ್ನೆ ರಾಜಸ್ತಾನದಲ್ಲಿ ಕೊಟ್ಪುತಲಿ ಸಮೀಪ ಮೊದಲ ಚುನಾವಣಾ ರ್‍ಯಾಲಿ ಉದ್ದೇಶಿಸಿ ಮಾತನಾಡಿದರು. ೨೦೧೪ ಮತ್ತು ೨೦೧೯ ರ ಚುನಾವಣೆಗಳಲ್ಲಿ ರಾಜ್ಯದಲ್ಲಿ ಬಿಜೆಪಿ ಎಲ್ಲಾ ೨೫ ಸ್ಥಾನಗಳನ್ನು ಗೆದ್ದಿತ್ತು, ಈಗ ಕೂಡಾ ಅದೇ ರೀತಿಯಾಗಲಿದೆ ಎಂದು ಪ್ರಧಾನಿ ಹೇಳಿದರು. ಇದು ಸಾರ್ವತ್ರಿಕ ಚುನಾವಣೆಯಲ್ಲ ಇದು ಅಭಿವೃದ್ಧಿ ಹೊಂದಿದ ಭಾರತ ಮತ್ತು ಅಭಿವೃದ್ಧಿ ಹೊಂದಿದ ರಾಜಸ್ತಾನದ ಚುನಾವಣೆ ಎಂದು ಹೇಳಿದರು.

ಮತ್ತೊಂದೆಡೆ ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಗೋವಿಂದ್ ಸಿಂಗ್ ದೋಟಸಾರ, ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಮತ್ತು ಪಕ್ಷದ ಹಿರಿಯ ಮುಖಂಡರು ಪಾಲಿ ಮತ್ತು ಜೋಧ್ ಪುರದಲ್ಲಿ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುವ ರಾಲಿ ಉದ್ದೇಶಿಸಿ ಮಾತನಾಡಿದರು.

<><*<><>*><>

ಕೇಂದ್ರ ಗೃಹ ಸಚಿವ ಹಾಗೂ ಬಿಜೆಪಿ ಹಿರಿಯ ಮುಖಂಡ ಅಮಿತ್ ಶಾ, ಮತದಾರರ ಬಳಿಗೆ ತೆರಳಿ, ವಿಕಸಿತ ಭಾರತ ಕಾರ್ಯಸೂಚಿಯ ಕುರಿತಂತೆ ಮಾಹಿತಿ ನೀಡಬೇಕೆಂದು ಪಕ್ಷದ ಕಾರ್ಯಕರ್ತರಲ್ಲಿ ಮನವಿ ಮಾಡಿದ್ದಾರೆ. ಕರ್ನಾಟಕದ ಬೆಂಗಳೂರಿನಲ್ಲಿ ಲೋಕ ಸಭಾ ಕ್ಷೇತ್ರಗಳ ಪ್ರಮುಖರನ್ನು ಉದ್ದೇಶಿಸಿ ಮಾತನಾಡಿದ ಅವರು, ಬಿಜೆಪಿ ವಿಕಸಿತ ಭಾರತವನ್ನು ಉತ್ತೇಜಿಸುತ್ತದೆ ಎಂದರು. ಹತ್ತು ವರ್ಷಗಳ ಎನ್ ಡಿ ಎ ಆಡಳಿತದಲ್ಲಿ ಆರ್ಥಿಕತೆ ಐದನೇ ಸ್ಥಾನಕ್ಕೆ ತಲುಪಿದೆ ಮತ್ತು ೨೫ ಕೋಟಿ ಜನರು ಬಡತನದಿಂದ ಹೊರಬಂದಿದ್ದಾರೆ, ಈ ಮಾಹಿತಿಯನ್ನು ಸಾರ್ವಜನಿಕರಿಗೆ ತಿಳಿಯಪಡಿಸಬೇಕೆಂದು ಪಕ್ಷದ ಕಾರ್ಯಕರ್ತರಿಗೆ ಅವರು ಹೇಳಿದರು. ಈ ಮಧ್ಯೆ, ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯ ಸಂಕಷ್ಟದಲ್ಲಿದ್ದಾಗ ಕೇಂದ್ರ ಗೃಹ ಸಚಿವರು ಭೇಟಿ ನೀಡಲಿಲ್ಲವೇಕೆಂದು ಪ್ರಶ್ನಿಸಿದ್ದಾರೆ. ನಿನ್ನೆ ಮೈಸೂರಿನಲ್ಲಿ ಮಾಧ್ಯಮದವರನ್ನುದ್ದೇಶಿಸಿ ಮಾತನಾಡಿದ ಸಿದ್ದರಾಮಯ್ಯ, ರಾಜ್ಯದಲ್ಲಿ ಬರಗಾಲದ ಸಂಕಷ್ಟವಿದ್ದಾಗ ಸ್ಪಂದಿಸದ ಬಿಜೆಪಿಗೆ ಮತ ಹಾಕಬೇಕೆ ಎಂದು ಪ್ರಶ್ನಿಸಿದರು. ಕೇಂದ್ರದ ತೆರಿಗೆಯ ಪಾಲನ್ನು ಕರ್ನಾಟಕಕ್ಕೆ ಕೇಂದ್ರ ನೀಡಿಲ್ಲ ಎಂದು ಆರೋಪಿಸಿದರು.

<><*<><>*><>

ಮುಂಬರುವ ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ೧೭ ಅಭ್ಯರ್ಥಿಗಳ ಮತ್ತೊಂದು ಪಟ್ಟಿಯನ್ನು ನಿನ್ನೆ ಬಿಡುಗಡೆ ಮಾಡಿದೆ. ಕಾಕಿನಾಡ ಲೋಕಸಭಾ ಕ್ಷೇತ್ರದಿಂದ ಮಾಜಿ ಕೇಂದ್ರ ಸಚಿವ ಎಂ.ಎಂ.ಪಲ್ಲಂ ರಾಜು ಮತ್ತು ಕಡಪದಿಂದ ಆಂಧ್ರಪ್ರದೇಶ ಕಾಂಗ್ರೆಸ್ ಅಧ್ಯಕ್ಷೆ ವೈ.ಎಸ್.ಶರ್ಮಿಳಾ ರೆಡ್ಡಿ ಸ್ಪರ್ಧಿಸಲಿದ್ದಾರೆ. ಪಕ್ಷದ ನಾಯಕ ಜೆ.ಡಿ.ಸೀಲಂ, ಆಂಧ್ರಪ್ರದೇಶದ ಬಾಪಟ್ಲಾ ಲೋಕಸಭಾ ಕ್ಷೇತ್ರದಿಂದ ಕಣಕ್ಕಿಳಿಯಲಿದ್ದಾರೆ. ಮಾಜಿ ಕೇಂದ್ರ ಸಚಿವ ತಾರಿಕ್ ಅನ್ವರ್ ಬಿಹಾರದ ಕಟಿಹಾರ್ ಲೋಕಸಭಾ ಕ್ಷೇತ್ರದಿಂದ ಮತ್ತು ಅಮೀರ್ ಚಂದ್ ನಾಯಕ್ ಒಡಿಶಾದ ಕಂಧಮಾಲ್ ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸಲಿದ್ದಾರೆ. ಆಂಧ್ರಪ್ರದೇಶ ವಿಧಾನಸಭಾ ಚುನಾವಣೆಗೆ ೧೧೪ ಮತ್ತು ಒಡಿಶಾ ವಿಧಾನಸಭಾ ಚುನಾವಣೆಗೆ ೪೯ ಅಭ್ಯರ್ಥಿಗಳ ಪಟ್ಟಿಯನ್ನು ಪಕ್ಷ ಬಿಡುಗಡೆ ಮಾಡಿದೆ.

<><*<><>*><>

ಕೇರಳದ ವಯನಾಡ್ ಲೋಕಸಭಾ ಕ್ಷೇತ್ರದ ಹಾಲಿ ಸಂಸದ ಹಾಗೂ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇಂದು ನಾಮಪತ್ರ ಸಲ್ಲಿಸಲಿದ್ದಾರೆ. ಕಲ್ಪೆಟ್ಟಾದ ಬಸ್ ನಿಲ್ದಾಣದ ಆವರಣದಿಂದ ಅವರು ರೋಡ್ ಶೋ ನಡೆಸಲಿದ್ದಾರೆ. ಈ ವೇಳೆ ಪಕ್ಷದ ಪ್ರಧಾನ ಕಾರ್ಯದರ್ಶಿಗಳಾದ ಪ್ರಿಯಾಂಕಾ ಗಾಂಧಿ, ಕೆ.ಸಿ.ವೇಣುಗೋಪಾಲ್ ಮತ್ತು ಇತರ ನಾಯಕರು ಸಾಥ್ ನೀಡಲಿದ್ದಾರೆ. ಎಲ್ ಡಿಎಫ್ ಅಭ್ಯರ್ಥಿ ಸಿಪಿಐನ ಅನ್ನಿ ರಾಜಾ ಕೂಡ ಇಂದು ನಾಮಪತ್ರ ಸಲ್ಲಿಸಲಿದ್ದಾರೆ. ಎನ್ ಡಿಎ ಅಭ್ಯರ್ಥಿ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಕೆ.ಸುರೇಂದ್ರನ್ ಅವರು ನಾಳೆ ಉಮೇದುವಾರಿಕೆ ಸಲ್ಲಿಸಲಿದ್ದಾರೆ. ಈ ಕ್ಷೇತ್ರವು ಯುಡಿಎಫ್, ಎಲ್ ಡಿಎಫ್ ಮತ್ತು ಎನ್ ಡಿಎ ಅಭ್ಯರ್ಥಿಗಳನ್ನು ಒಳಗೊಂಡ ತ್ರಿಕೋನ ಸ್ಪರ್ಧೆಗೆ ಸಾಕ್ಷಿಯಾಗಲಿದೆ. ಕರ್ನಾಟಕದಲ್ಲಿ ಇದೇ ತಿಂಗಳ ೨೬ರಂದು ಮೊದಲ ಹಂತದ ಸಾರ್ವತ್ರಿಕ ಚುನಾವಣೆ ನಡೆಯಲಿದ್ದು, ವಿವಿಧ ಪಕ್ಷಗಳ ಅಭ್ಯರ್ಥಿಗಳು ಇಂದು ನಾಮಪತ್ರ ಸಲ್ಲಿಸಲಿದ್ದಾರೆ.

<><*<><>*><>

ಮಧ್ಯಪ್ರದೇಶದಲ್ಲಿ ಎರಡನೇ ಹಂತದಲ್ಲಿನಡೆಯಲಿರುವ ಏಳು ಲೋಕಸಭಾ ಸ್ಥಾನಗಳಿಗೆ ೨೧ ಅಭ್ಯರ್ಥಿಗಳು ಒಟ್ಟು ೨೭ ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಈ ಸ್ಥಾನಗಳಿಗೆ ಏಪ್ರಿಲ್ ೨೬ ರಂದು ಚುನಾವಣೆ ನಡೆಯಲಿದೆ. ಇದೇ ವೇಳೆ, ಮೊದಲ ಹಂತದ ಚುನಾವಣಾ ಪ್ರಚಾರ ತೀವ್ರಗೊಂಡಿದೆ. ಮತದಾರರ ಜಾಗೃತಿ ಚಟುವಟಿಕೆಗಳು ಸಹ ಭರದಿಂದ ಸಾಗಿವೆ.

<><*<><>*><>

ಉತ್ತರದ ಗಡಿಗಳಲ್ಲಿನ ಪ್ರಸ್ತುತ ಪರಿಸ್ಥಿತಿಯನ್ನು ಎದುರಿಸಲು ನಿಷ್ಕ್ರಿಯತೆ ಮತ್ತು ಉದ್ವಿಗ್ನತೆಯನ್ನು ಕಡಿಮೆ ಮಾಡುವುದು ಮುಂದಿನ ಮಾರ್ಗವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಸೈನಿಕರು ದೃಢವಾಗಿ ನಿಂತಿದ್ದರೂ, ಶಾಂತಿಯುತ ಪರಿಹಾರಕ್ಕಾಗಿ ನಡೆಯುತ್ತಿರುವ ಮಾತುಕತೆ ಮುಂದುವರಿಯುತ್ತದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ದೆಹಲಿಯಲ್ಲಿ ನಿನ್ನೆ ನಡೆದ ಸೇನಾ ಕಮಾಂಡರ್ ಗಳ ಸಮ್ಮೇಳನವನ್ನುದ್ದೇಶಿಸಿ ಮಾತನಾಡಿದ ರಾಜನಾಥ್ ಸಿಂಗ್, ಪಶ್ಚಿಮ ಗಡಿಯಲ್ಲಿ ಸೇನೆ ಮತ್ತು ಭದ್ರತಾ ಪಡೆಗಳ ಪ್ರಯತ್ನಗಳನ್ನು ಶ್ಲಾಘಿಸಿದರು. ದೇಶದ ಗಡಿಗಳನ್ನು ಕಾಯುವಲ್ಲಿ ಮತ್ತು ಭಯೋತ್ಪಾದನೆಯ ವಿರುದ್ಧ ಹೋರಾಡುವಲ್ಲಿ ಮತ್ತು ಅಗತ್ಯವಿರುವ ಸಮಯದಲ್ಲಿ ನಾಗರಿಕ ಆಡಳಿತಕ್ಕೆ ನೆರವು ನೀಡುವಲ್ಲಿ ಸೇನೆಯು ವಹಿಸಿರುವ ಪ್ರಮುಖ ಪಾತ್ರದ ಬಗ್ಗೆ ಅವರು ಬೆಳಕು ಚೆಲ್ಲಿದರು.

<><*<><>*><>

ಮುಂಬರುವ ಬೇಸಿಗೆ ಋತುವಿನಲ್ಲಿ ವಿದ್ಯುತ್ ಬೇಡಿಕೆ ಪೂರೈಸುವುದನ್ನು ಖಾತರಿ ಪಡಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ. ಈ ನಿಟ್ಟಿನಲ್ಲಿ ವಿದ್ಯುತ್, ಹೊಸ ಮತ್ತು ನವೀಕರಿಸಬಹುದಾದ ಇಂಧನ ಖಾತೆ ಸಚಿವ ಆರ್ ಕೆ ಸಿಂಗ್ ಸರಣಿ ಸಭೆಗಳನ್ನು ನಡೆಸಿದ್ದು, ಬೇಸಿಗೆ ಋತುವಿನಲ್ಲಿ ಶೂನ್ಯ ಲೋಡಿಂಗ್ ಖಚಿತ ಪಡಿಸಿಕೊಳ್ಳುವ ಅಗತ್ಯತೆತೆ ಒತ್ತು ನೀಡಬೇಕೆಂದು ಹೇಳಿದರು. ನವದೆಹಲಿಯಲ್ಲಿ ನಡೆದ ಸಭೆಯಲ್ಲಿ ಸಚಿವರು, ಉಷ್ಣ ವಿದ್ಯುತ್ ಸ್ಥಾವರದಲ್ಲಿ ಸಾಮರ್ಥ್ಯದ ಗರಿಷ್ಠ ಲಭ್ಯತೆಯನ್ನು ಖಾತ್ರಿಪಡಿಸುವ ಉದ್ದೇಶದಿಂದ, ಭಾಗಶಃ ಸ್ಥಗಿತವನ್ನು ಅನುಭವಿಸುತ್ತಿರುವ ಎಲ್ಲಾ ಉಷ್ಣ ವಿದ್ಯುತ್ ಸ್ಥಾವರಗಳ ವಿದ್ಯುತ್ ಸಾಮರ್ಥ್ಯದ ಸ್ಥಿತಿಯನ್ನು ಪರಿಶೀಲಿಸಿದರು. ಮುಂಬರುವ ಬೇಸಿಗೆ ಋತುವಿನಲ್ಲಿ ದೇಶದ ವಾಯುವ್ಯ, ಈಶಾನ್ಯ, ಹಾಗೂ ಕೆಲವು ಭಾಗಗಳನ್ನು ಹೊರತುಪಡಿಸಿ ದೇಶಾದ್ಯಂತ ತಾಪಮಾನ ಸಾಧಾರಣ ಗರಿಷ್ಠ ಮತ್ತು ಸಾಧಾರಣ ಕನಿಷ್ಠಕ್ಕಿಂತ ಹೆಚ್ಚಾಗಿರಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಹೀಗಾಗಿ ಹಿಂದಿನ ವರ್ಷಗಳಿಗಿಂತ ಈ ವರ್ಷ ವಿದ್ಯುತ್ ಬೇಡಿಕೆಯೂ ಹೆಚ್ಚಾಗಿಯೇ ಇರಲಿದೆ.

**<><*<><>*><>**

ಗಡಿ ಭದ್ರತಾ ಪಡೆಯ ನವ ದೆಹಲಿಯ ಅಶ್ವಿನಿ ಬಿಎಸ್ಎಫ್ ಆಫೀಸರ್ಸ್ ಇನ್ಸ್ ಟಿಟ್ಯೂಟ್ ನಲ್ಲಿ ಕುಶಲ ಕಲೆ ವಸ್ತುಪ್ರದರ್ಶನವನ್ನು ಆಯೋಜಿಸಿದೆ. ಈ ವಸ್ತು ಪ್ರದರ್ಶನ ಇದೇ ತಿಂಗಳ ೫ ರವರೆಗೂ ನಡೆಯಲಿದ್ದು ಸಾರ್ವಜನಿಕರಿಗೆ ಮುಕ್ತವಾಗಿದೆ. ಈ ವಸ್ತು ಪ್ರದರ್ಶನವು ಬೆಳಿಗ್ಗೆ ೧೧ ಗಂಟೆಯಿಂದ ಸಂಜೆ ೭ ಗಂಟೆಯವರೆಗೆ ಇರಲಿದ್ದು, ಸಂಜೆ ಸಂಗೀತ ಪ್ರದರ್ಶನವೂ ಇರಲಿದೆ. ದೇಶಾದ್ಯಂತ ೧೧೫ ಕ್ಕೂ ಹೆಚ್ಚು ಗಡಿ ಭದ್ರತಾ ಪಡೆಯ ಸಿಬ್ಬಂದಿ ಹಾಗೂ ಅವರ ಕುಟುಂಬಗಳು ಈ ವಸ್ತು ಪ್ರದರ್ಶನದಲ್ಲಿ ತಮ್ಮ ಪ್ರತಿಭೆ ಪ್ರದರ್ಶಿಸಿದರು. ವಸ್ತುಪ್ರದರ್ಶನದಲ್ಲಿ ವಿಸ್ತೃತ ಶ್ರೇಣಿಯ ಕಲಾಕೃತಿಗಳು, ಪೈಂಟಿಂಗ್ ಗಳು, ಮರದಲ್ಲಿ, ಕಲ್ಲಿನಲ್ಲಿ ಕೆತ್ತಲಾದ ವಿಗ್ರಹಗಳು, ಬಿದಿರು ಕಲೆ, ಇತ್ಯಾದಿ ಪ್ರದರ್ಶಿಸಲಾಗಿದೆ. ಕೇಂದ್ರ ಗೃಹ ಕಾರ್ಯದರ್ಶಿ ವಸ್ತುಪ್ರದರ್ಶನದಲ್ಲಿ ಹಾಜರಿದ್ದು, ಬಿಎಸ್ಎಫ್ ಪ್ರಹರಿ ೨.೦ ಆಪ್ ಉದ್ಘಾಟಿಸಿದರು. ಉನ್ನತೀಕರಿಸಲಾದ ಆವೃತ್ತಿಯ ಈ ಆಪ್, ಗಡಿ ಯೋಧರಿಗೆ ವಿವಿಧ ಪ್ರಮುಖ ಸೇವಾ ಸಂಬಂಧಿತ ವಿಷಯಗಳಿಗೆ ವಾರದ ಏಳೂದಿನಗಳು ಪ್ರವೇಶಾವಕಾಶ ಒದಗಿಸಲಿದೆ.

**<><*<><>*><>**

ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ಎಫ್ ಎಸ್‌ಎಸ್‌ಎಐ, ತಮ್ಮ ಜಾಲತಾಣಗಳಲ್ಲಿ ಮಾರಾಟ ಮಾಡಲಾಗುತ್ತಿರುವ ಆಹಾರ ಉತ್ಪನ್ನಗಳ ಸಮರ್ಪಕ ವರ್ಗೀಕರಣವನ್ನು ಖಾತರಿ ಪಡಿಸಿಕೊಳ್ಳಬೇಕೆಂದು ಎಲ್ಲಾ ಇ-ವಾಣಿಜ್ಯ ಆಹಾರ ವ್ಯಾಪಾರ ಕಾರ್ಯನಿರ್ವಾಹಕರುಗಳಿಗೆ ಸೂಚಿಸಿದೆ. ಹೆಲ್ತ್ ಡ್ರಿಂಕ್ ಮತ್ತು ಎನರ್ಜಿ ಡ್ರಿಂಕ್ ವರ್ಗದ ಅಡಿಯಲ್ಲಿ ಇ-ವಾಣಿಜ್ಯ ಜಾಲತಾಣಗಳಲ್ಲಿ ಡೈರಿ ಆಧರಿತ ಪಾನೀಯ ಮಿಶ್ರಣಗಳು, ಬೇಳೆಕಾಳು ಆಧರಿತ ಪಾನೀಯ ಮಿಶ್ರಣಗಳು, ಮತ್ತು ಮಾಲ್ಟ್ ಆಧಾರಿದ ಪಾನೀಯಗಳ ಮಾರಾಟ ಮಾಡುತ್ತಿರುವುದನ್ನು  ಎಫ್ ಎಸ್ ಎಸ್ ಎ ಐ ,ಗಮನಿಸಿದೆ. ಆಹಾರ ಸುರಕ್ಷತೆ ಮತ್ತು ಪ್ರಮಾಣಗಳು ಕಾಯ್ದೆ ಮತ್ತು ನಿಬಂಧನೆಗಳಲ್ಲಿ ಎಲ್ಲಿಯೂ ಕೂಡಾ ಹೆಲ್ತ್ ಡ್ರಿಂಕ್ ಎನ್ನುವ ಪದವನ್ನು ವ್ಯಾಖ್ಯಾನಿಸಿಲ್ಲ ಅಥವಾ ಪ್ರಮಾಣೀಕರಿಸಿಲ್ಲ ಎಂದು ಎಫ್ ಎಸ್ ಎಸ್ ಎ ಐ , ಸ್ಪಷ್ಟೀಕರಿಸಿರುವುದಾಗಿ ಕೇಂದ್ರ ಆರೋಗ್ಯ ಸಚಿವಾಲಯ ಹೇಳಿದೆ. ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ ಎಲ್ಲಾ ಇ-ಕಾಮರ್ಸ್ ಆಹಾರ ವ್ಯಾಪಾರ ಕಾರ್ಯನಿರ್ವಾಹಕರುಗಳಿಗೆ ತಮ್ಮ ಜಾಲತಾಣಗಳಲ್ಲಿ ಆರೋಗ್ಯ ಪಾನೀಯಗಳು ಮತ್ತು ಶಕ್ತಿ ಪಾನೀಯಗಳ ವರ್ಗದಿಂದ ಅಂತಹ ಪಾನೀಯಗಳು ಅಥವಾ ಪಾನೀಯಗಳನ್ನು ತೆಗೆದುಹಾಕುವ ಅಥವಾ ಡಿ-ಲಿಂಕ್ ಮಾಡುವ ಮೂಲಕ ಈ ತಪ್ಪು ವರ್ಗೀಕರಣವನ್ನು ತ್ವರಿತವಾಗಿ ಸರಿಪಡಿಸಬೇಕೆಂದು ಸಲಹೆ ನೀಡಿದೆ. ತಪ್ಪುದಾರಿಗೆಳೆಯುವ ಮಾಹಿತಿಯನ್ನು ಎದುರಿಸದೆ, ಗ್ರಾಹಕರು ಉತ್ತಮ ತಿಳುವಳಿಕೆಯುಳ್ಳ ಆಯ್ಕೆಗಳನ್ನು ಮಾಡಬಹುದು ಎಂದು ಖಚಿತಪಡಿಸಿಕೊಳ್ಳಬೇಕೆನ್ನುವುದು ಈ ಕ್ರಮವು ಉದ್ದೇಶವಾಗಿದೆ ಎಂದು ಸಚಿವಾಲಯ ಹೇಳಿದೆ.

**<><*<><>*><>**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಖನೌ ಸೂಪರ್ ಜಯಂಟ್ಸ್ ತಂಡ ೨೮ ರನ್ ಗಳಿಂದ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಸೋಲಿಸಿ, ಟೂರ್ನಿಯಲ್ಲಿ ಸತತ ಎರಡನೇ ಜಯ ದಾಖಲಿಸಿದೆ. ೧೮೨ ರನ್ ಗುರಿ ಬೆನ್ನಟ್ಟಿದ ಬೆಂಗಳೂರು ತಂಡ ಎರಡು ಎಸೆತಗಳು ಬಾಕಿ ಇರುವಂತೆಯೇ ತನ್ನೆಲ್ಲಾ ವಿಕೆಟ್ ನಷ್ಟಕ್ಕೆ ೧೫೩ ರನ್ ಗಳಿಗೆ ಸೀಮಿತಗೊಂಡಿತು. ಹೀಗಾಗಿ ಮೂರನೇ ಸೋಲಿಗೆ ಬೆಂಗಳೂರು ತಂಡ ಗುರಿಯಾಯಿತು. ಲಖನೌ ತಂಡದ ಪರ ೧೪ ರನ್ ನೀಡಿ ೩ ವಿಕೆಟ್ ಪಡೆದ ಮಯಂಕ್ ಯಾದವ್ ಪಂದ್ಯ ಶ್ರೇಷ್ಠ ಗೌರವಕ್ಕೆ ಭಾಜನರಾದರು.

ಇದಕ್ಕೂ ಮುನ್ನ ಟಾಸ್ ಸೋತು ಬ್ಯಾಟಿಂಗ್ ಗೆ ಆಹ್ವಾನ ಪಡೆದ ಲಖನೌ ೨೦ ಓವರ್ ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೮೧ ರನ್ ಕಲೆಹಾಕಿತು. ಲಖನೌ ಪರ ಕ್ವಿಂಟನ್ ಡಿಕಾಕ್ ಮತ್ತು ನಿಕೋಲಸ್ ಪೂರನ್ ಕ್ರಮವಾಗಿ ೮೧ ಮತ್ತು ೪೦ ರನ್ ಗಳಿಸಿದರು. ವಿಶಾಖಪಟ್ಟಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಕೋಲ್ಕತಾ ನೈಟ್ ರೈಡರ್ಸ್ ತಂಡಗಳು ಎದುರಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ <>*><>**